ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER:

ದಿನಾಂಕ : DATE: 12/6/2020

ಇಂದೇ ನಿರ್ಧಾರ ತಿಳಿಸಲು ಸರ್ಕಾರಕ್ಕೆ ಹೈಕೋರ್ಟ್ ನಿರ್ದೇಶನ | ಅಧಿಸೂಚನೆಗೆ ತಡೆಯಾಜ್ಞೆ ನೀಡುವ ಎಚ್ಚರಿಕೆ

# ಕಾರ್ಮಿಕರ ಕೆಲಸದ ಅವಧಿ ಹೆಚ್ಚಿಸಿರುವ ಕ್ರಮ ಸರಿಯಲ್ಲ

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು 12.06.2020

ಕೋವಿಡ್-19 ಪರಿಸ್ಥಿತಿಯನ್ನು 'ಸಾರ್ವಜನಿಕ ತುರ್ತು ಪರಿಸ್ಥಿತಿ' ಎಂದು ಪರಿಗಣಿಸಿ ಕೈಗಾರಿಕೆಗಳ ಕಾಯ್ದೆಯ ಸೆಕ್ಷನ್ 5ರ ಅನ್ವಯ ಕಾರ್ಮಿಕರ ಕೆಲಸದ ಅವಧಿ ಹೆಚ್ಚಿಸಿರುವ ಸರ್ಕಾರದ ಕ್ರಮ ಒಪ್ಪಲಾಗದು ಎಂದು ಹೈಕೋರ್ಟ್ ಹೇಳಿದೆ. ಸರ್ಕಾರ ಹೊಸದಾಗಿ ನಿರ್ಧಾರ ಕೈಗೊಳ್ಳದಿದ್ದರೆ ಕೆಲಸದ ಅವಧಿ ಹೆಚ್ಚಿಸಿರುವ ಅಧಿಸೂಚನೆಗೆ ತಡೆಯಾಜ್ಞೆ ನೀಡುವುದಾಗಿ ತಿಳಿಸಿದೆ.

**» ದಿನದ ಕೆಲಸದ ಅವಧಿ 10 ತಾಸು ಹೆಚ್ಚಳ ಪ್ರಶ್ನಿಸಿ ಅರ್ಜಿ ಪ್ರಕರಣ**



ಕಾರ್ಮಿಕರ ಪ್ರತಿ ದಿನದ ಕೆಲಸದ ಅವಧಿಯನ್ನು 10 ತಾಸುಗಳವರೆಗೆ ಹೆಚ್ಚಿಸಿ ಸರ್ಕಾರ ಹೊರಡಿಸಿರುವ ಅಧಿಸೂಚನೆ ರದ್ದುಪಡಿಸಲು ಕೋರಿ ಮಾರುತಿ ಎಂಬುವರು ಸಲ್ಲಿಸಿರುವ ಪಿಐಎಲ್ ಅನ್ನು ಸಿಜೆ ಎ.ಎಸ್. ಓಕ್ ನೇತೃತ್ವದ ವಿಭಾಗೀಯ ಪೀಠ ಗುರುವಾರ ವಿಚಾರಣೆ ನಡೆಸಿತು. ಕೈಗಾರಿಕೆಗಳ ಕಾಯ್ದೆಯ ಸೆಕ್ಷನ್ 5 ಉಲ್ಲೇಖಿಸಿ ಕಾರ್ಮಿಕರ ಪ್ರತಿ ದಿನದ ಕೆಲಸದ ಅವಧಿಯನ್ನು ಸರ್ಕಾರ ಹೆಚ್ಚಿಸಿದೆ. ಸೆಕ್ಷನ್ 5ರ ಪ್ರಕಾರ ಹೊರಗಿನ ಆಕ್ರಮಣ ಮತ್ತು ಆಂತರಿಕ ಸಮಸ್ಯೆಗಳಿಂದ ದೇಶದ ಭದ್ರತೆಗೆ ತೊಂದರೆಯಾದಾಗ ಮಾತ್ರ ಇಂತಹ ತೀರ್ಮಾನ ಕೈಗೊಳ್ಳಲು ಅವಕಾಶವಿದೆ ಎಂದು ಮೌಖಿಕ ಅಭಿಪ್ರಾಯ ವ್ಯಕ್ತಪಡಿಸಿರುವ ಹೈಕೋರ್ಟ್, ಶುಕ್ರವಾರದೊಳಗೆ ಹೊಸದಾಗಿ ತೀರ್ಮಾನ ತೆಗೆದುಕೊಳ್ಳದಿದ್ದರೆ, ಅಧಿಸೂಚನೆಗೆ ತಡೆಯಾಜ್ಞೆ ನೀಡಲಾಗುವುದು ಎಂದು ತಿಳಿಸಿತು.

## ಅರ್ಜಿದಾರರ ಮನವಿ ಏನು?

**ಕಾರ್ಖಾನೆಗಳ ಕಾಯ್ದೆ-1984ರ ಸೆಕ್ಷನ್ 51 ಮತ್ತು 54ರಿಂದ ಎಲ್ಲಾ ಕಾರ್ಖಾನೆಗಳಿಗೆ ವಿನಾಯಿತಿ ನೀಡಿ ಮೇ 22ರಂದು ಸರ್ಕಾರ ಹೊರಡಿಸಿರುವ ಅಧಿಸೂಚನೆಯ ಪರಿಣಾಮ ಕಾರ್ಮಿಕರ ಪ್ರತಿ ದಿನದ ಕೆಲಸದ ಅವಧಿ 9 ತಾಸು ಮತ್ತು 10 ತಾಸು ಹಾಗೂ ವಾರದ ಕೆಲಸದ ಅವಧಿ 48 ಗಂಟೆಗಳಿಂದ 60 ಗಂಟೆಗಳಿಗೆ ಹೆಚ್ಚಿಸಲಾಗಿದೆ. ಆದ್ದರಿಂದ, ಸರ್ಕಾರದ ಅಧಿಸೂಚನೆ ರದ್ದುಪಡಿಸಬೇಕೆಂದು ಅರ್ಜಿದಾರರು ಕೋರಿದ್ದಾರೆ.**

## ದುಷ್ಕರ್ಮಿಗಳ ವಿರುದ್ಧ ಕ್ರಮ ಏಕಿಲ್ಲ?

ಬೆಂಗಳೂರು: ಕಾಚರಕನಹಳ್ಳಿ ಬಳಿಯ ಕೊಳೆಗೇರಿಯಲ್ಲಿ ವಲಸೆ ಕಾರ್ಮಿಕರ 90ಕ್ಕೂ ಅಧಿಕ ಗುಡಿಸಲುಗಳಿಗೆ ಬೆಂಕಿ ಹಚ್ಚಿರುವ ಬಗ್ಗೆ ಬೇಸರ ವ್ಯಕ್ತಪಡಿಸಿರುವ ಹೈಕೋರ್ಟ್, ಈವರೆಗೂ ತಪ್ಪಿತಸ್ಥರ ವಿರುದ್ಧ ಕ್ರಮ ಜರುಗಿಸದಿರುವುದಕ್ಕೆ ಕಾರಣ ತಿಳಿಸುವಂತೆ ಸರ್ಕಾರಕ್ಕೆ ನಿರ್ದೇಶಿಸಿದೆ. ವಕೀಲೆ ವೈಶಾಲಿ ಹೆಗ್ಡೆ ಬರೆದಿದ್ದ ಪತ್ರ ಆಧರಿಸಿ ದಾಖಲಿಸಿಕೊಂಡಿರುವ ಸ್ವಯಂಪ್ರೇರಿತ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಮುಖ್ಯ ನ್ಯಾಯಮೂರ್ತಿ ಎ.ಎಸ್. ಓಕ್ ಹಾಗೂ ನ್ಯಾ.ಇ.ಎಸ್. ಇಂದಿರೇಶ್ ಅವರಿದ್ದ ಪೀಠ ಗುರುವಾರ ವಿಚಾರಣೆ ನಡೆಸಿತು.

ಲಾಕ್‌ಡೌನ್ ಪರಿಸ್ಥಿತಿ ಲಾಭ ಪಡೆದು ಯಾರೋ ಕೆಲವರು ಬಡ ಕಾರ್ಮಿಕರ ಗುಡಿಸಲುಗಳಿಗೆ ಬೆಂಕಿ ಹಚ್ಚಿರುವುದು ಅಮಾನವೀಯ. ಪ್ರಕರಣವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಬೇಕಿದೆ.

**» ಕಾರ್ಮಿಕರ ಗುಡಿಸಲಿಗೆ ಬೆಂಕಿ ಹಚ್ಚಿದ ಪ್ರಕರಣ**

90ಕ್ಕೂ ಅಧಿಕ ಗುಡಿಸಲುಗಳಿಗೆ ಬೆಂಕಿ ಹಚ್ಚಲಾಗಿದ್ದರೂ ತಪ್ಪಿತಸ್ಥರ ವಿರುದ್ಧ ಏಕೆ ಕ್ರಮ ಜರುಗಿಸಲಾಗಿಲ್ಲ ಎಂದು ಪ್ರಶ್ನಿಸಿದ ಪೀಠ, ಯಾವ ಕಾರಣಕ್ಕೆ ಕ್ರಮ ಜರುಗಿಸಲು ವಿಳಂಬವಾಗಿದೆ ಎಂಬ ಬಗ್ಗೆ 24ರೊಳಗೆ ವಿವರಣೆ ನೀಡುವಂತೆ ಸರ್ಕಾರಕ್ಕೆ ತಾಕೀತು ಮಾಡಿತು. ಘಟನೆ ಸಂಬಂಧ ಅಗ್ನಿಶಾಮಕ ದಳ ಸಿದ್ಧಪಡಿಸಿರುವ ವರದಿಯನ್ನೂ ಕೋರ್ಟ್‌ಗೆ ಸಲ್ಲಿಸುವಂತೆ ನಿರ್ದೇಶನ ನೀಡಿತು.